ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – 575 001.

ಕರ್ನಾಟಕ ಸರಕಾರ

GOVERNMENT OF KARNATAKA

( ಕಂದಾಯ ಇಲಾಖೆ )

Deputy Commissioner & District Magistrate's Office, Dakshina Kannada District, Mangaluru – 575 001.

ನಂ.ಎಂಎಜಿ(2)ಸಿಆರ್. 156/2021/133465/ಸಿ4/7 ದಿನಾಂಕ: 06-05-2021

## ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ: ಜಿಲ್ಲೆಯಲ್ಲಿ ಕೋವಿಡ್-19 ಸೋಂಕು ಪ್ರಸರಣದ ಸರಪಳಿಯನ್ನು ಮುರಿಯಲು ಮಾರ್ಗಸೂಚಿಗಳನ್ನು ಜಾರಿಗೊಳಿಸುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಆದೇಶ ಸಂ. ಎಂಎಜಿ(2)ಸಿಆರ್ 156/2021/133465/ಸಿ4/4 ದಿನಾಂಕ: 27-04-2021

2) ಈ ಕಛೇರಿ ಆದೇಶ ಸಂ. ಎಂಎಜಿ(2)ಸಿಆರ್ 156/2021/133465/ಸಿ4/5 ದಿನಾಂಕ: 29-04-2021

3) ಈ ಕಛೇರಿ ಆದೇಶ ಸಂ. ಎಂಎಜಿ(2)ಸಿಆರ್ 156/2021/133465/ಸಿ4/6 ದಿನಾಂಕ: 01-05-2021

4) ದಿನಾಂಕ: 05-06-2021 ರಂದು ನಡೆದ ತಜ್ಞರ ಸಮಿತಿಯ ಸಭೆ.

5) ದಿನಾಂಕ: 06-05-2021 ರಂದು ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ.

———@———

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 (ಕೋರೊನಾ ವೈರಾಣು ಕಾಯಿಲೆ - 2019) ನಿಯಂತ್ರಣಕ್ಕೆ ಸಂಬಂಧಿಸಿದಂತೆ ಸರ್ಕಾರದ ನಿರ್ದೇಶನದಂತೆ ಜಿಲ್ಲಾಡಳಿತವು ಕಾಲಕಾಲಕ್ಕೆ ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ.

ಪ್ರಸ್ತುತ ಸರಕಾರದ ಮಾರ್ಗಸೂಚಿಯಂತೆ ಉಲ್ಲೇಖ (3) ರ ಆದೇಶದಲ್ಲಿ ಜನಸಂದಣಿಯನ್ನು ನಿಯಂತ್ರಿಸುವ ಸಲುವಾಗಿ ಅವಶ್ಯ ವಸ್ತುಗಳ ಖರೀದಿಗೆ ಕಲ್ಪಿಸಲಾಗಿದ್ದ ಕಾಲಾವಕಾಶವನ್ನು ವಿಸ್ತರಿಸಿ ಎಪಿಎಂಸಿ ಮತ್ತು ದಿನಸಿ ಅಂಗಡಿಗಳನ್ನು ಬೆಳಿಗ್ಗೆ 6.00 ಗಂಟೆಯಿಂದ ಅಪರಾಹ್ನ 12.00 ಗಂಟೆಯವರೆಗೆ ತೆರೆಯಲು ಅವಕಾಶ ನೀಡಲಾಗಿರುತ್ತದೆ. ಈ ಸಮಯದಲ್ಲಿ ಸಾರ್ವಜನಿಕರು ಅವಶ್ಯ ವಸ್ತುಗಳ ಖರೀದಿಗೆ ಮಾತ್ರ ಮನೆಯಿಂದ ಹೊರಗೆ ಬರುವಂತೆ ಸೂಚಿಸಿದ್ದರೂ ಕೂಡಾ ಸಕಾರಣಗಳಿಲ್ಲದೆ ಅನಗತ್ಯವಾಗಿ ಸಂಚರಿಸುತ್ತಿರುವುದರಿಂದ ಕೋವಿಡ್ ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಕಷ್ಟಸಾಧ್ಯವಾಗಿರುತ್ತದೆ.

ಜಿಲ್ಲೆಯಲ್ಲಿ ಕೋವಿಡ್-19 ಪ್ರಕರಣಗಳು ದಿನದಿಂದ ದಿನಕ್ಕೆ ಉಲ್ಬಣಗೊಳ್ಳುತ್ತಿದ್ದು, ಆರೋಗ್ಯ ಮೂಲ ಸೌಕರ್ಯಗಳನ್ನು ಹೆಚ್ಚಿಸುವುದರೊಂದಿಗೆ ಸೋಂಕು ಪ್ರಸರಣದ ಸರಪಳಿಯನ್ನು ತುಂಡರಿಸಲು ಕಠಿಣ ನಿರ್ಬಂಧಕ ಕ್ರಮಗಳನ್ನು ಕೈಗೊಳ್ಳುವುದು ಕೂಡಾ ಜಿಲ್ಲಾಡಳಿತದ ಕರ್ತವ್ಯವಾಗಿರುತ್ತದೆ.

ಈ ವಿಚಾರದ ಬಗ್ಗೆ ದಿನಾಂಕ: 05-05-2021 ರಂದು ನಡೆದ ತಜ್ಞರ ಸಮಿತಿ ಸಭೆ ಮತ್ತು ಜಿಲ್ಲೆಯ ಜನಪ್ರತಿನಿಧಿಗಳನ್ನು ಒಳಗೊಂಡಂತೆ ದಿನಾಂಕ:06-05-2021 ರಂದು ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ನಿರ್ಣಯಿಸಿರುವಂತೆ, ಸಾರ್ವಜನಿಕರ ಅನಗತ್ಯ ಓಡಾಟದಿಂದ ಸೋಂಕು ಹರಡಿ ಪರಿಸ್ಥಿತಿಯು ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆಗಳಿರುವುದರಿಂದ ಜಿಲ್ಲೆಯ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಕೋವಿಡ್-19 ಸೋಂಕು ಪ್ರಸರಣದ ಸರಪಳಿಯನ್ನು ಮುರಿಯಲು ಕಟ್ಟುನಿಟ್ಟಿನ ನಿಯಂತ್ರಣ ಕ್ರಮಗಳನ್ನು ಜಾರಿಗೊಳಿಸುವ ಅಗತ್ಯತೆಯನ್ನು ಮನಗಂಡು ಡಾ. ರಾಜೇಂದ್ರ ಕೆ.ವಿ, ಭಾ.ಆ.ಸೇ., ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ



Scanned with CamScanner

ಕನ್ನಡ ಜಿಲ್ಲೆ, ಮಂಗಳೂರು ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34, ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ಕಲಂ 4 ಮತ್ತು ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144(3) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಗಿನಂತೆ ಆದೇಶ ಹೊರಡಿಸಿರುತ್ತೇನೆ.

## ಆದೇಶ

*ಜಿಲ್ಲೆಯಲ್ಲಿ ಕೋವಿಡ್-19 ಸೋಂಕು ಪ್ರಸರಣದ ಸರಪಳಿಯನ್ನು ಮುರಿಯಲು (ವಾರಾಂತ್ಯದ ಕರ್ಫ್ಯೂ ದಿನಗಳನ್ನು ಹೊರತುಪಡಿಸಿ) ಈಗಾಗಲೇ ಜ್ಯಾರಿಯಲ್ಲಿರುವ ಉಲ್ಲೇಖ (1) ಮತ್ತು (2) ರ ಆದೇಶದೊಂದಿಗೆ ದಿನಾಂಕ: 07-05-2021 ರ ಬೆಳಿಗ್ಗೆ 6.00 ಗಂಟೆಯಿಂದ ಅನ್ವಯವಾಗುವಂತೆ ಮುಂದಿನ ಆದೇಶದವರೆಗೆ ಈ ಕೆಳಕಂಡ ಹೆಚ್ಚುವರಿ ಮಾರ್ಗಸೂಚಿಗಳು ಕಟ್ಟುನಿಟ್ಟಾಗಿ ಜಾರಿಯಲ್ಲಿರುತ್ತವೆ.*

1. ಮಂಗಳೂರಿನ ಬೈಕಂಪಾಡಿಯ ಎಪಿಎಂಸಿ, ಎಲ್ಲಾ ದಿನಸಿ ಅಂಗಡಿಗಳು ಹಾಗೂ ಅವಶ್ಯಕ ಸೇವೆಗಳನ್ನು ಒದಗಿಸುವ ಎಲ್ಲಾ ಅಂಗಡಿಗಳು ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಮಾತ್ರ ತೆರೆಯಲು ಅನುಮತಿಸಿದೆ. ಬೆಳಿಗ್ಗೆ 10.00 ಗಂಟೆಯ ನಂತರ ಎಲ್ಲಾ ಅಂಗಡಿಗಳನ್ನು ಮುಚ್ಚತಕ್ಕದ್ದು ಹಾಗೂ ನಿಗದಿಪಡಿಸಿದ ಸಮಯದ ನಂತರ ಯಾವುದೇ ಮಾರಾಟಗಾರರು ಹಾಗೂ ಖರೀದಿದಾರರ ಓಡಾಟವನ್ನು ನಿಷೇಧಿಸಿದೆ.
2. ಆನ್ ಲೈನ್ ಸೇವಾ ಪೂರೈಕೆದಾರರಾದ Swiggy, Zomato ಇತ್ಯಾದಿ ಸೇವಾ ಪೂರೈಕೆದಾರರು ರಾತ್ರಿ 11.00 ಗಂಟೆಯವರೆಗೆ ಮಾತ್ರ ಸಂಚರಿಸಲು ಅವಕಾಶ ನೀಡಲಾಗಿದೆ.
3. ಅನುಮತಿ ಪಡೆದ ಸಮಾರಂಭಗಳೂ ಸೇರಿದಂತೆ, ಮದುವೆ ಮತ್ತು ಇತರೆ ಎಲ್ಲಾ ಸಮಾರಂಭಗಳನ್ನು ದಿನಾಂಕ: 15-05-2021 ರ ಮಧ್ಯರಾತ್ರಿ 12.00 ಗಂಟೆಯ ನಂತರ ನಿರ್ಬಂಧಿಸಲಾಗಿದೆ. ದಿನಾಂಕ: 15-05-2021 ರವರೆಗೆ ನಿಗದಿಯಾಗಿರುವ ಮದುವೆಗಳನ್ನು ಸರ್ಕಾರದ ಮಾರ್ಗಸೂಚಿಯನ್ವಯ ನಡೆಸಲು ಅನುಮತಿಸಿದೆ.
4. ಅನಗತ್ಯವಾಗಿ ಸಕಾರಣಗಳಿಲ್ಲದೆ ಸಂಚರಿಸುವ ಎಲ್ಲಾ ವಾಹನಗಳನ್ನು ಮುಟ್ಟುಗೋಲು ಹಾಕಲಾಗುವುದು.
5. ಸ್ಥಳೀಯ ಸಂಸ್ಥೆಗಳು ಕೋವಿಡ್ ಸಮುಚಿತ ವರ್ತನೆಯನ್ನು ಉಲ್ಲಂಘಿಸಿದವರ ವಿರುದ್ಧ ಸರ್ಕಾರದ ಮಾರ್ಗಸೂಚಿಗಳನ್ವಯ ಕ್ರಮ ಕೈಗೊಳ್ಳುವುದು.

## ವಾರಂತ್ಯ ಕರ್ಫ್ಯೂ

ಜಿಲ್ಲೆಯಾದ್ಯಂತ ಶುಕ್ರವಾರ ರಾತ್ರಿ 9.00 ಗಂಟೆಯಿಂದ ಸೋಮವಾರ ಬೆಳಿಗ್ಗೆ 6.00 ಗಂಟೆಯವರೆಗೆ ವಾರಾಂತ್ಯ ಕರ್ಫ್ಯೂ ಜ್ಯಾರಿಯಲ್ಲಿರುತ್ತದೆ.

ವಾರಂತ್ಯದ ಕರ್ಫ್ಯೂ ಗೆ ಮಾರ್ಗಸೂಚಿಗಳು:

i. ಔಷಧಿ ಅಂಗಡಿಗಳು ಮತ್ತು ಆಸ್ಪತ್ರೆಗಳನ್ನು ಹೊರತುಪಡಿಸಿ ಶುಕ್ರವಾರ ರಾತ್ರಿ 9 ರಿಂದ ಸೋಮವಾರ ಬೆಳಿಗ್ಗೆ 6 ರವರೆಗೆ ಎಲ್ಲಾ ರೀತಿಯ ಚಟುವಟಿಕೆಗಳನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಿದೆ. ಸಾರ್ವಜನಿಕರು ಈ ಸೇವೆಗಳನ್ನು ತಮ್ಮ ಹತ್ತಿರದ ಅಂಗಡಿಗಳಿಂದ ಮಾತ್ರವೇ ಪಡೆಯತಕ್ಕದ್ದು.

ii. ತುರ್ತು ಮತ್ತು ಅಗತ್ಯ ಸೇವೆಗಳೊಂದಿಗೆ ವ್ಯವಹರಿಸುವ ಮತ್ತು 24/7 ಕಾರ್ಯಾಚರಣೆಗಳ ಅಗತ್ಯವಿರುವ ಕೈಗಾರಿಕೆಗಳು / ಕಂಪನಿಗಳು / ಸಂಸ್ಥೆಗಳು ಮಾತ್ರವೇ ಕಾರ್ಯನಿರ್ವಹಿಸಲು ಅನುಮತಿ ನೀಡಲಾಗಿದೆ.

iii. ಈ ಸಂದರ್ಭದಲ್ಲಿ ಯಾವುದೇ ನಿರ್ಮಾಣ ಚಟುವಟಿಕೆಗಳಿಗೆ ಅವಕಾಶವಿರುವುದಿಲ್ಲ. ಆದಾಗ್ಯೂ ನಿರ್ಮಾಣ ಚಟುವಟಿಕೆಗಳು ನಡೆಯುವ ಸ್ಥಳದಲ್ಲಿಯೇ ಕಾರ್ಮಿಕರು ಲಭ್ಯವಿದ್ದು, ಹೊರಗಿನ ಪ್ರದೇಶಗಳಿಂದ ಕಾರ್ಮಿಕರನ್ನು ಕರೆತರುವ ಅಗತ್ಯತೆಯಿಲ್ಲದಿದ್ದಲ್ಲಿ ಅಂತಹ ನಿರ್ಮಾಣ ಕಾರ್ಯಗಳನ್ನು ನಡೆಸಬಹುದಾಗಿರುತ್ತದೆ.

iv. ರೋಗಿಗಳು ಮತ್ತು ಅವರ ಪರಿಚಾರಕರು / ವೈದ್ಯಕೀಯ ತುರ್ತು ಸಂದರ್ಭದಲ್ಲಿ ಜನರಿಗೆ ಕನಿಷ್ಠ ಪುರಾವೆಗಳೊಂದಿಗೆ ಸಂಚರಿಸಲು ಅನುಮತಿಸಲಾಗಿದೆ.



Scanned with CamScanner

v. ದಿನಾಂಕ 08-05-2021 ಮತ್ತು 09-05-2021 ರಂದು ನಿಗದಿಯಾಗಿರುವ ಮದುವೆ ಕಾರ್ಯಕ್ರಮಗಳನ್ನು ಸರ್ಕಾರದ ಮಾರ್ಗಸೂಚಿಯಂತೆ ಜನರ ಪರಿಮಿತಿಗೊಳಪಟ್ಟು COVID 19 ಸಮುಚಿತ ವರ್ತನೆಯನ್ನು ಕಡ್ಡಾಯವಾಗಿ ಪಾಲಿಸಿಕೊಂಡು ನಡೆಸಲು ಅನುಮತಿ ನೀಡಲಾಗಿದೆ.

vi. ಶವಸಂಸ್ಕಾರ / ಅಂತ್ಯಕ್ರಿಯೆಗಳನ್ನು ಗರಿಷ್ಠ 5 ಜನರ ಪರಿಮಿತಿಗೊಳಪಟ್ಟು COVID 19 ಸಮುಚಿತ ವರ್ತನೆಯನ್ನು ಕಡ್ಡಾಯವಾಗಿ ಪಾಲಿಸಿಕೊಂಡು ನಡೆಸುವುದು.

ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದೆ.

ಮೇಲಿನ ಆದೇಶವನ್ನು ಯಾವುದೇ ವ್ಯಕ್ತಿ/ವ್ಯಕ್ತಿಗಳು ಉಲ್ಲಂಘಿಸಿದ್ದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 51 ರಿಂದ 60 ರನ್ವಯ, ಐಪಿಸಿ ಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ರ ಕಲಂ 5 ಮತ್ತು 10 ರಂತೆ ಕ್ರಮ ಜರುಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 06-05-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

06/05/2021

ಡಾ. ರಾಜೇಂದ್ರ ಕೆ.ವಿ., ಐ.ಎ.ಎಸ್.
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

DISTRICT MAGISTRATE, D. K.
GOVT. OF KARNATAKA

ರಿಗೆ:

1. ಪೊಲೀಸ್ ಆಯುಕ್ತರು, ಮಂಗಳೂರು ನಗರ, ಮಂಗಳೂರು
2. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು
3. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.
4. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು
5. ಉಪ ಆಯುಕ್ತರು, ಅಬಕಾರಿ ಇಲಾಖೆ, ಮಂಗಳೂರು
6. ಆಯುಕ್ತರು, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
7. ವಿಭಾಗೀಯ ನಿಯಂತ್ರಣಾಧಿಕಾರಿ, ಕೆ.ಎಸ್.ಆರ್.ಟಿ.ಸಿ., ಮಂಗಳೂರು / ಪುತ್ತೂರು.
8. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
9. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ
10. ಪ್ರಾದೇಶಿಕ ಸಾರಿಗೆ ಅಧಿಕಾರಿ, ಮಂಗಳೂರು / ಪುತ್ತೂರು / ಬಂಟ್ವಾಳ.
11. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
12. ವಿಭಾಗೀಯ ನಿಯಂತ್ರಣಾಧಿಕಾರಿ, ಕೆ.ಎಸ್.ಆರ್.ಟಿ.ಸಿ., ಮಂಗಳೂರು / ಪುತ್ತೂರು.
13. ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಮಂಗಳೂರು.
14. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ
15. ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ
16. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು- ಇವರಿಗೆ ಕಳುಹಿಸುತ್ತಾ ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.

Email-dc.mnglr@gmail.com website: dk.nic.in Phone:0824-2220590/588

Scanned with CamScanner